FEBRUARY 23, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದ ಪ್ರತಿ ಜಿಲ್ಲೆಗಳಲ್ಲಿಯೂ ಬಡವರಿಗಾಗಿ** ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಗಳನ್ನು ಸ್ಥಾಪಿಸುವ ಗುರಿಯೊಂದಿಗೆ, ಜಿಲ್ಲಾ ಕೇಂದ್ರಗಳಲ್ಲಿ ಎಲ್ಲ ವೈದ್ಯಕೀಯ ವ್ಯವಸ್ಥೆ ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ, ಉತ್ತರ ಕನ್ನಡ ಜಿಲ್ಲೆ, ಕಾರವಾರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ, ನಿರ್ಮಾಣಗೊಂಡಿರುವ ಮಲ್ಟಿ ಸ್ಪೆಶಾಲಿಟಿ ಆಸ್ಪತ್ರೆ ಕಟ್ಟಡ ಉದ್ಘಾಟನೆ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದಲ್ಲಿ ಪ್ರಸ್ತುತ 22 ಸರ್ಕಾರಿ ವೈದ್ಯಕೀಯ ಕಾಲೇಜುಗಳಿವೆ, ಮುಂದಿನ ದಿನಗಳಲ್ಲಿ ಕೋಲಾರ, ಪುತ್ತೂರು ಹಾಗೂ ವಿಜಯಪುರಗಳಲ್ಲಿ ನೂತನ ಮೆಡಿಕಲ್ ಕಾಲೇಜುಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

**ಬೆಳಗಾವಿ ಜಿಲ್ಲೆ, ದೇಸೂರು ಗ್ರಾಮದಲ್ಲಿ** ಮೂಲಸೌಕರ್ಯ ಅಭಿವೃದ್ಧಿಗೆ ವೇಗ ದೊರಕಿದೆ. ಕಮಲ ನಗರದಲ್ಲಿ ಸುಮಾರು 1 ಕೋಟಿ ರೂಪಾಯಿ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಭೂಮಿ ಪೂಜೆ ನೆರವೇರಿಸಿದರು. ಗ್ರಾಮದ ಜನರಿಗೆ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ದೃಷ್ಟಿಯಿಂದ ರಸ್ತೆ ಕಾಮಗಾರಿ ಅತ್ಯಂತ ಅಗತ್ಯವಾಗಿದೆ. ಸತತ ಪ್ರಯತ್ನ ಹಾಗೂ ವಿಶೇ ʼ ಕಾಳಜಿಯ ಫಲವಾಗಿ ಅನುದಾನ ಬಿಡುಗಡೆಯಾಗಿದೆ. ಅಭಿವೃದ್ಧಿಯ ನಿಟ್ಟಿನಲ್ಲಿ ದೇಸೂರು ಗ್ರಾಮವನ್ನು ಮಾದರಿ ಗ್ರಾಮವಾಗಿ ರೂಪಿಸಲಾಗುವುದು ಎಂದರು. ಇದೇ ವೇಳೆ ಗ್ರಾಮದಲ್ಲಿ 25 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಮಾರುತಿ ದೇವಸ್ಥಾನದ ಕಟ್ಟಡ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲಿಸಿದರು.

<><><>

**ಪುಣೆಯಲ್ಲಿ ಜರುಗಿದ ಹಿರಿಯರ ರಾಷ್ಟ್ರೀಯ** ಮಟ್ಟದ, ರಿದಮಿಕ್ ಜಿಮ್ನಾಸ್ಟಿಕ್ ಚಾಂಪಿಯನ್ ಶಿಪ್ 2025–26 ರ, ಗುಂಪು ಹಾಗೂ ವಯಕ್ತಿಕ ಸ್ಪರ್ಧೆಗಳಲ್ಲಿ ಧಾರವಾಡದ ಬಾಲಮಾರುತಿ ಜಿಮ್ನಾಸ್ಟಿಕ್ ಸಂಸ್ಥೆಯ, ಅನು ಮುತಗಿ ಹಾಗೂ ರಕ್ಷಿತಾ ಗೊರವರ ನಾಲ್ಕು ಕಂಚಿನ ಪದಕಗಳನ್ನು ಜಯಿಸಿದ್ದಾರೆ. ಈರ್ವರನ್ನು ಜಿಮ್ನಾಸ್ಟಿಕ್ ಸಂಸ್ಥೆಯ ಅಧಿಕಾರಿಗಳು ಹಾಗೂ ತರಬೇತುದಾರರು ಅಭಿನಂದಿಸಿದ್ದಾರೆ. ರಾಷ್ಟ್ರೀಯ ಮಟ್ಟದಮ ಮಹಿಳಾ ವಿಭಾಗದ ಜಿಮ್ನಾಸ್ಟಿಕ್ ಸ್ಪರ್ಧೆಯಲ್ಲಿ ಪದಕ ವಿಜೇತರಾದ ಅನು ಮುತಗಿ, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಅನು ಮುತಗಿ ಧ್ವನಿ 37 ಸೆಕೆಂದುಗಳು**

<><><>

**ಹುಬ್ಬಳ್ಳಿ, ರಾಜನಗರದ ಕರ್ನಾಟಕ ರಾಜ್ಯ ಕ್ರಿಕೆಟ್** ಅಸೋಸಿಯೇಶನ್ ಮೈದಾನದಲ್ಲಿ ಮೊತ್ತಮೊದಲ ಬಾರಿಗೆ ರಣಜಿ ಟ್ರೋಫಿ ಫೈನಲ್ ಪಂದ್ಯ ನಡೆಯುತ್ತಿರುವುದು ಹೆಮ್ಮೆ ಹಾಗೂ ಸಂತಸದ ವಿಷಯವಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ನಾಳೆಯಿಂದ ಆರಂಭವಾಗಲಿರುವ ಕರ್ನಾಟಕ ಹಾಗೂ ಜಮ್ಮು ಕಾಶ್ಮೀರ ತಂಡಗಳ, ರಣಜಿ

ಫೈನಲ್ ಪಂದ್ಯದ ಕುರಿತು ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಕೆ.ಎಸ್.ಸಿ.ಎ ಪದಾಧಿಕಾರಿಗಳೊಂದಿಗಿನ ಭೇಟಿ ಕುರಿತು ಉಲ್ಲೇಖಿಸಿ, ಕ್ರಿಕೆಟ್ ಪ್ರೇಮಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಂದ್ಯ ವೀಕ್ಷಿಸುವಂತೆ ಕರೆ ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ರಾಷ್ಟ್ರೀಯ ಮಟ್ಟದ ಕ್ರಿಕೆಟ್ ಪಂದ್ಯಾವಳಿ ಆಯೋಜನೆಗೆ ತಾವು ಸತತವಾಗಿ ಪ್ರಯತ್ನಿಸುತ್ತಿರುವುದಾಗಿ ತಿಳಿಸಿದ್ದಾರೆ.

<><><>

**ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ–ಕೆಪಿಸಿಸಿ,** ಇಂದು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನರೇಗಾ ಬಚಾವೋ ಬೃಹತ್ ಆಂದೋಲನವನ್ನು ಆಯೋಜಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಸಂಪುಟದ ಸದಸ್ಯರು ಹಾಗೂ ಪಕ್ಷದ ಹಿರಿಯ ಮುಖಂಡರು ಪಾಲ್ಗೊಳ್ಳಲಿದ್ದಾರೆ.

<><><>

**ಕಲಬುರಗಿಯಲ್ಲಿ ಆಯೋಜಿತ,** ರಾಷ್ಟ್ರೀಯ ನಾಟಕೋತ್ಸವದ ಮೂರನೇ ದಿನವಾದ ಇಂದು, ಸಂಜೆ 7 ಗಂಟೆಗೆ, ನಗರದ ಎಸ್.ಎಂ ಪಂಡಿತ್ ರಂಗಮಂದಿರದಲ್ಲಿ ಬೆಂಗಳೂರಿನ, ಕಲಾಗಂಗೋತ್ರಿ ಪ್ರಸ್ತುತ ಪಡಿಸುವ, ಬಿ.ವಿ ರಾಜಾರಾಂ ನಿರ್ದೇಶನದ ನಾಟಕ– 'ಮುಖ್ಯಮಂತ್ರಿ' ಪ್ರದರ್ಶನಗೊಳ್ಳಲಿದೆ. ಕನ್ನಡ ಸಾಹಿತ್ಯ ಭವನದಲ್ಲಿ ಆಯೋಜಿತ, ರಂಗಭೂಮಿ ಸಂವಾದ ಕಾರ್ಯಕ್ರಮದಲ್ಲಿ, 'ರಂಗಾಭಿನಯದ ಸೂಕ್ಷ್ಮತೆ' ಕುರಿತು, ಹಿರಿಯ ರಂಗಕರ್ಮಿ ಎಚ್.ಕೆ ಶ್ವೇತಾರಾಣಿ ಅವರು ಮಾತನಾಡಲಿದ್ದಾರೆ.

<><><>

**ಆಯುರ್ವೇದ ಭಾರತದ ಪುರಾತನ ಹಾಗೂ** ವೈಜ್ಞಾನಿಕ ಚಿಕಿತ್ಸಾ ಪದ್ಧತಿಯಾಗಿದೆ. ರೋಗದ ಮೂಲ ಕಾರಣವನ್ನು ಗುರುತಿಸಿ, ಅಡ್ಡ ಪರಿಣಾಮರಹಿತ ಹಾಗೂ ದೀರ್ಘಕಾಲಿಕ ಆರೋಗ್ಯವನ್ನು ಒದಗಿಸುವ ಸಾಮರ್ಥ್ಯ ಆಯುರ್ವೇದಕ್ಕಿದೆ ಎಂದು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಬೀದರಿನಲ್ಲಿ ಆಯೋಜಿಸಲಾದ ಆಯುರ್ವೇದ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಜೀವನಶೈಲಿ ಹಾಗೂ ಒತ್ತಡದಿಂದ ಉಂಟಾಗುತ್ತಿರುವ ಅನೇಕ ಕಾಯಿಲೆಗಳಿಗೆ ಆಯುರ್ವೇದ ಪರಿಣಾಮಕಾರಿ ಪರಿಹಾರ ನೀಡುತ್ತಿದೆ ಎಂದರು.

<><><>

**ಕಲಬುರಗಿಯ, ಗುಲಬರ್ಗಾ ವಿಶ್ವವಿದ್ಯಾಲಯದ, 43ನೇ ವಾರ್ಷಿಕ** ಘಟಿಕೋತ್ಸವ ನಾಳೆ 24 ರಂದು, ವಿಶ್ವವಿದ್ಯಾಲಯದ ಜ್ಞಾನಗಂಗಾ ಆವರಣದಲ್ಲಿರುವ ಡಾಕ್ಟರ ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಜರುಗಲಿದೆ. ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯಗಳ ಕುಲಾಧಿಪತಿಗಳಾದ ಥಾವರ್ ಚಂದ್ ಗೆಹ್ಲೋಟ್ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಪದವಿ ಪ್ರದಾನ ಮಾಡಲಿದ್ದಾರೆ.

<><><>

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>